## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಚುನಾವಣಾ ಆಯೋಗದಲ್ಲಿ ಕಾರ್ಯನಿರ್ವಹಿಸಲು ಹೆಚ್ಚುವರಿ ಹುದ್ದೆಗಳನ್ನು ಸೃಜಿಸುವ ಕುರಿತು.

ಓದಲಾಗಿದೆ: ಅಧೀನ ಕಾರ್ಯದರ್ಶಿ ರಾಜ್ಯ ಚುನಾವಣಾ ಆಯೋಗ ಇವರ ಪತ್ರ ಸಂಖ್ಯೆ: ರಾಚುಅ:14.ಸಿಬ್ಬಂದಿ.2016 ದಿನಾಂಕ: 21-04-2016.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಪತ್ರದಲ್ಲಿ ರಾಜ್ಯ ಚುನಾವಣಾ ಆಯೋಗವು, ಸರ್ಕಾರಕ್ಕೆ ಪತ್ರ ಬರೆದು ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993 ಪ್ರಕರಣ 43-ಎ ಮತ್ತು ಬಿ, 136 ಎ ಹಾಗೂ 175 ಎ ಮತ್ತು ಬಿ ಗೆ ತಿದ್ದುಪಡಿ ತಂದಿರುತ್ತದೆ. ತಿದ್ದುಪಡಿಯನ್ವಯ ಗ್ರಾಮ/ತಾಲ್ಲೂಕು/ಜಿಲ್ಲಾ ಪಂಚಾಯತಿ ಚುನಾಯಿತ ಸದಸ್ಯರ ಆಸ್ತಿ ಘೋಷಣೆಯ ವಿಷಯವು ರಾಜ್ಯ ಚುನಾವಣಾ ಆಯೋಗದ ಕಾರ್ಯವ್ಯಾಪ್ತಿಗೆ ಸಂಬಂಧಿಸಿರುವುದರಿಂದ, ರಾಜ್ಯ ಚುನಾವಣಾ ಆಯೋಗದ ಕಾರ್ಯವ್ಯಾಪ್ತಿ ವಿಸ್ತಾರಗೊಂಡಿರುತ್ತದೆ.

ಪ್ರಸ್ತುತ ರಾಜ್ಯದಲ್ಲಿ ಒಟ್ಟು 6020 ಗ್ರಾಮ ಪಂಚಾಯತಿಗಳು ಇದ್ದು, ಒಂದು ಲಕ್ಷಕ್ಕಿಂತಲೂ ಅಧಿಕ ಸಂಖ್ಯೆಯ ಚುನಾಯಿತ ಸದಸ್ಯರು ಇರುತ್ತಾರೆ. ಒಂದು ಲಕ್ಷಕ್ಕೂ ಅಧಿಕವಿರುವ ಸದಸ್ಯರ ಆಸ್ತಿ ವಿವರಗಳನ್ನು ನಿಗದಿತ ಅವಧಿಯಲ್ಲಿ ಪರಾಮರ್ಶಿಸಲು ಪ್ರತ್ಯೇಕವಾಗಿ ಸಿಬ್ಬಂದಿಗಳನ್ನು ಸೃಜಿಸುವ ಅವಶ್ಯಕತೆ ಇರುತ್ತದೆ.

ಹಾಲಿ ರಾಜ್ಯ ಚುನಾವಣಾ ಆಯೋಗದಲ್ಲಿ ಸಿಬ್ಬಂದಿಗಳ ಕೊರತೆ ಇರುವುದರಿಂದ, ಈ ಕೆಳಕಂಡ ಹುದ್ದೆಗಳನ್ನು ಸೃಜಿಸಬೇಕೆಂದು ಕೋರಿರುತ್ತಾರೆ.

1) ಅಧೀನ ಕಾರ್ಯದರ್ಶಿ – 1 ಹುದ್ದೆ
2) ಶಾಖಾಧಿಕಾರಿ – 1 ಹುದ್ದೆ
3) ಪ್ರ.ದ.ಸ – 2 ಹುದ್ದೆ
4) ದ್ವಿ.ದ.ಸ –2 ಹುದ್ದೆ
5) ವಾಹನ ಚಾಲಕ – 1 ಹುದ್ದೆ
6) ಗ್ರೂಪ್ ಡಿ – 1 ಹುದ್ದೆ

ರಾಜ್ಯ ಚುನಾವಣಾ ಆಯೋಗದ ಕೋರಿಕೆಯನುಸಾರವಾಗಿ, ಸಹಮತಿ ಕೋರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಿಕೊಡಲಾಗಿತ್ತು. ಈ ಸಂಬಂಧ ಆರ್ಥಿಕ ಇಲಾಖೆಯ ಸಹಮತಿಯ ಅನುಸಾರ, ರಾಜ್ಯ ಚುನಾವಣಾ ಆಯೋಗದಲ್ಲಿ ಹೊಸದಾಗಿ ಸೃಜನೆ ಬದಲು ಖಾಲಿ ಇರುವ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರು ಮತ್ತು ಗ್ರೂಪ್ "ಡಿ" ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಮುಂದುವರೆದು, ಒಂದು ಅಧೀನ ಕಾರ್ಯದರ್ಶಿ ಹುದ್ದೆ ಮತ್ತು ಒಂದು ಶಾಖಾಧಿಕಾರಿ ಹುದ್ದೆಯನ್ನು ಸೃಜಿಸಿ, ನಿಯೋಜನೆ ಮೇರೆಗೆ ನೇಮಕ ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 152 ಜಿಪಸ 2017, ಬೆಂಗಳೂರು, ದಿನಾಂಕ:27-12-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯ ಚುನಾವಣಾ ಆಯೋಗದಲ್ಲಿ ಹೊಸದಾಗಿ ಸೃಜನೆ ಬದಲು ಖಾಲಿ ಇರುವ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರು ಮತ್ತು ಗ್ರೂಪ್ "ಡಿ" ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಮುಂದುವರೆದು, ಒಂದು ಅಧೀನ ಕಾರ್ಯದರ್ಶಿ ಹುದ್ದೆ ಮತ್ತು ಒಂದು ಶಾಖಾಧಿಕಾರಿ ಹುದ್ದೆಯನ್ನು ಸೃಜಿಸಿ, ನಿಯೋಜನೆ ಮೇರೆಗೆ ಭರ್ತಿ ಮಾಡಲು ಆದೇಶಿಸಿದೆ.

-2-

ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ/388/ವೆಚ್ಚ-6/2016 ದಿನಾಂಕ: 16-12-2017 ರಲ್ಲಿ ನೀಡಿದ ಸಹಮತಿ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

PDevasahayam 27/12/2017
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ, ನಂ-8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ಅಪರ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
4. ವ್ಯವಸ್ಥಾಪಕರು, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
5. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.